RNU AIR DHARWAD

## AUGUST 7, 2025
## ALL INDIA RADIO- DHARWAD
## PRADESH SAMACHARA (KANNADA) 7:05 AM

ಮುಖ್ಯಾಂಶಗಳು

- ಕರ್ನಾಟಕದಲ್ಲಿ ರೈಲ್ವೆ ಸಂಪರ್ಕ ಹೆಚ್ಚಿಸಲು ಭಾರತೀಯ ರೈಲ್ವೆಯಿಂದ ಹಲವು ಯೋಜನೆಗಳು.
- ಇದೇ 10 ರಂದು, ಬೆಳಗಾವಿ–ಬೆಂಗಳೂರು ವಂದೇ ಭಾರತ್ ರೈಲು ಸಂಚಾರಕ್ಕೆ ಪ್ರಧಾನ ಮಂತ್ರಿ ಚಾಲನೆ.
- ಸಾಮಾಜಿಕ ಹಾಗೂ ಆರ್ಥಿಕ ಭದ್ರತಾ ಯೋಜನೆಗಳ ಕುರಿತು, ಜನಸುರಕ್ಷಾ ಅಭಿಯಾನ ಮುಂದುವರಿಕೆ.
- ಗದಗ ಜಿಲ್ಲೆ ಗಜೇಂದ್ರಗಡದ ಪಟ್ಟೇದ ಅಂಚು ಸೀರೆಗೆ, ಹತ್ತಿ ವಿಭಾಗದಲ್ಲಿ ರಾಜ್ಯ ಮಟ್ಟದ ಕೈಮಗ್ಗ ನೇಕಾರರ ಪ್ರಶಸ್ತಿ.

ಈಗ ವಾರ್ತೆಗಳ ವಿವರ

*******

ಕರ್ನಾಟಕದಲ್ಲಿ ರೈಲ್ವೆ ಸಂಪರ್ಕ ಹೆಚ್ಚಿಸಲು ಭಾರತೀಯ ರೈಲ್ವೆ, ಹಲವಾರು ಯೋಜನೆಗಳನ್ನು ಕೈಗೆತ್ತಿಕೊಂಡಿದೆ ಎಂದು, ರೈಲ್ವೆ ಸಚಿವ ಅಶ್ವಿನಿ ವೈಷ್ಣವ್, ಹೇಳಿದ್ದಾರೆ. ದಾವಣಗೆರೆ ಸಂಸದೆ ಡಾಕ್ಟರ್ ಪ್ರಭಾ ಮಲ್ಲಿಕಾರ್ಜುನ ಪ್ರಶ್ನೆಗೆ ಲೋಕಸಭೆಯಲ್ಲಿ ಉತ್ತರಿಸಿದ ಸಚಿವರು, ಕರ್ನಾಟಕದ ಅನೇಕ ಯೋಜನೆಗಳು ಭೂಸ್ವಾಧೀನ ಪ್ರಕ್ರಿಯೆಯಿಂದ, ವಿಳಂಬವಾಗುತ್ತಿವೆ. ಶಿವಮೊಗ್ಗ–ಹರಿಹರ ಹೊಸ ಮಾರ್ಗ ಯೋಜನೆ 50–50ರ ವೆಚ್ಚ ಹಂಚಿಕೆ ಆಧಾರದ ಮೇಲೆ ಮಂಜೂರು ಮಾಡಲಾಗಿದ್ದು, ಕರ್ನಾಟಕ ಸರ್ಕಾರ 832 ಕೋಟಿ ರೂಪಾಯಿ ವೆಚ್ಚದಲ್ಲಿ, ಉಚಿತವಾಗಿ ಭೂಮಿ ಒದಗಿಸಬೇಕಾಗಿದೆ. ಈ ಯೋಜನೆಗೆ 488 ಹೆಕ್ಟೇರ್ ವಿಸ್ತೀರ್ಣದ ಭೂಮಿ ಸ್ವಾಧೀನಪಡಿಸಿಕೊಳ್ಳುವಂತೆ, ಕರ್ನಾಟಕ ಸರ್ಕಾರಕ್ಕೆ ಕೋರಿದ್ದರೂ, ವೆಚ್ಚ ಹಂಚಲು ಮತ್ತು ಭೂಮಿಯನ್ನು ಉಚಿತವಾಗಿ ನೀಡಲು ಹಿಂದೇಟು ಹಾಕುತ್ತಿದೆ. ಇದರಿಂದ ಯೋಜನೆ ಸ್ಥಗಿತಗೊಂಡಿದೆ ಎಂದು ಸಚಿವರು ಮಾಹಿತಿ ನೀಡಿದರು.

*******

ಬೆಳಗಾವಿ–ಬೆಂಗಳೂರು ವಂದೇ ಭಾರತ್ ರೈಲು ಸಂಚಾರಕ್ಕೆ ಇದೇ 10 ರಂದು ಪ್ರಧಾನ ಮಂತ್ರಿ ನರೇಂದ್ರ ಮೋದಿ ಚಾಲನೆ ನೀಡಲಿದ್ದಾರೆ. ಈ ಕುರಿತು ಮಾಹಿತಿ ನೀಡಿರುವ ಸಂಸದ ಜಗದೀಶ್ ಶೆಟ್ಟರ್, ಅಂದು ಪ್ರಧಾನಿ ರಾಜ್ಯಕ್ಕೆ ಭೇಟಿ ನೀಡಲಿದ್ದು,

ವಿವಿಧ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ. ಇದೇ ಸಂದರ್ಭದಲ್ಲಿ ಬೆಳಗಾವಿಗೆ ಸಂಚರಿಸಲಿರುವ ನೂತನ ವಂದೇ ಭಾರತ್ ರೈಲಿಗೆ ಚಾಲನೆ ನೀಡಲಿದ್ದಾರೆ ಎಂದರು.

ಧ್ವನಿ–ಜಗದೀಶ ಶೆಟ್ಟರ್–32 ಸೆಕೆಂಡ್ಸ್

*******

120 ಹಾಸಿಗೆ ಸಾಮರ್ಥ್ಯ ಹೊಂದಿರುವ ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಯನ್ನು 300 ಹಾಸಿಗೆಗಳಿಗೆ ಹೆಚ್ಚಿಸುವ ಪ್ರಸ್ತಾವನೆ ಪರಿಗಣಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಬೆಂಗಳೂರಿನಲ್ಲಿ ನಿನ್ನೆ ವಿಕ್ಟೋರಿಯಾ ಆಸ್ಪತ್ರೆಗೆ ಧೀಡಿರ್ ಭೇಟಿ ನೀಡಿದ ನಂತರ ಸುದ್ದಿಗಾರೊಂದಿಗೆ ಮಾತನಾಡಿದ ಅವರು, ಉಚಿತ ಚಿಕಿತ್ಸೆ ಇರುವುದರಿಂದ ಒತ್ತಡವೂ ಹೆಚ್ಚಿರುತ್ತದೆ. ವೈದ್ಯರು ಸಹನೆಯಿಂದ ಕೆಲಸ ಮಾಡಬೇಕು. ರೋಗಿಗಳನ್ನು ಸಹಾನುಭೂತಿಯಿಂದ ಕಾಣಬೇಕು ಎಂದು ವೈದ್ಯರಿಗೆ ಸೂಚನೆ ನೀಡಲಾಗಿದೆ ಎಂದರು. ವಾಣಿ ವಿಲಾಸ ಆಸ್ಪತ್ರೆ ಹಾಗೂ ಟ್ರಾಮಾ ಸೆಂಟರ್ ಗೆ ಸಹ ಭೇಟಿ ನೀಡಿದ್ದು, ವಾಣಿ ವಿಲಾಸ ಆಸ್ಪತ್ರೆಯಲ್ಲಿ ಒಂದು ದಿನಕ್ಕೆ 40 ಕ್ಕೂ ಹೆಚ್ಚು ಹೆರಿಗೆಗಳಾಗುತ್ತವೆ. ಬೇರೆ ಬೇರೆ ರಾಜ್ಯದ ಜನರು ಇಲ್ಲಿ ಚಿಕಿತ್ಸೆಗಾಗಿ ಬರುತ್ತಾರೆ. ಜನ ದಟ್ಟಣೆ ಹೆಚ್ಚಿರುವುದರಿಂದ ಆಸ್ಪತ್ರೆಯ ಹಾಸಿಗೆಗಳನ್ನು ಹೆಚ್ಚು ಮಾಡಬೇಕಿದೆ. ವೈದ್ಯರ ಹುದ್ದೆಗಳನ್ನು ಭರ್ತಿ ಮಾಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

*******

ಜಿಲ್ಲೆಯಾದ್ಯಂತ ಉತ್ತಮ ಮಳೆ ಆಗುತ್ತಿದ್ದು ರೈತರಿಗೆ ರಸಗೊಬ್ಬರಗಳ ಕೊರತೆ ಉಂಟಾಗದಂತೆ ಕ್ರಮವಹಿಸಬೇಕು ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಸ್ತುವಾರಿ ಸಚಿವ ಕೆ.ಹೆಚ್ ಮುನಿಯಪ್ಪ ಕೃಷಿ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ನಡೆದ ತಾಲ್ಲೂಕು ಮಟ್ಟದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಯೂರಿಯಾ, ಡಿಎಪಿ ಗೊಬ್ಬರಕ್ಕೆ ಹೆಚ್ಚು ಬೇಡಿಕೆ ಇದೆ. ರಸಗೊಬ್ಬರ ದಾಸ್ತಾನು ಅಂಗಡಿ ಮಳಿಗೆಗಳಿಗೆ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಬೇಕು. ಕೃಷಿ, ತೋಟಗಾರಿಕೆ ಬೆಳೆಗಳಿಗೆ ವಿಮೆ ಮಾಡಿಸಲು ರೈತರಿಗೆ ಅರಿವು ಮೂಡಿಸಬೇಕು ಎಂದು ಸೂಚನೆ ನೀಡಿದರು.

*******

ಜನಪರವಾದ ಅಭಿವೃದ್ಧಿ ಕೆಲಸಗಳಿಗೆ ಜನತೆಯ ಸಹಕಾರ ಅಗತ್ಯ. ಜನರ ಹಿತದೃಷ್ಟಿಯಿಂದ ಕೈಗೆತ್ತಿಕೊಂಡ ಕಾಮಗಾರಿಗಳನ್ನು ಕಾಲ ಮಿತಿಯಲ್ಲಿ ಪೂರ್ಣಗೊಳಿಸಬೇಕು ಎಂದು ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ ಸೂಚಿಸಿದ್ದಾರೆ. ಶಹಾಪುರದಲ್ಲಿ ನಿನ್ನೆ ವಿವಿಧ ಕಾಮಗಾರಿ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೆಕೆಆರ್‌ಡಿಬಿ ವತಿಯಿಂದ 1 ಕೋಟಿ ರೂಪಾಯಿ ವೆಚ್ಚದಲ್ಲಿ ಲಾಂಗ್ ಟೆನಿಸ್ ಕ್ರೀಡಾಂಗಣ ಹಾಗೂ 75 ಲಕ್ಷ ರೂಪಾಯಿ ವೆಚ್ಚದಲ್ಲಿ ಓಪನ್ ಜಿಮ್ ಕಾಮಗಾರಿ ಕೈಗೆತ್ತಿಕೊಳ್ಳಲಾಗಿದೆ ಎಂದರು. ಶಹಾಪುರ ನಗರದ ಅಲ್ಪಸಂಖ್ಯಾತರ ಭವನ ನಿರ್ಮಾಣಕ್ಕೆ 2 ಕೋಟಿ ರೂಪಾಯಿ, ವೀರಶೈವ ಕಲ್ಯಾಣ ಭವನ ಹಾಗೂ ಕನಕಭವನ

ನಿರ್ಮಾಣಕ್ಕೆ ತಲಾ 2 ಕೋಟಿ ರೂಪಾಯಿ ಸರ್ಕಾರ ಮಂಜೂರಾತಿ ನೀಡಿದ್ದು, ತ್ವರಿತವಾಗಿ ಕೆಲಸ ನಿರ್ವಹಿಸಲಾಗುವುದು ಎಂದು ಸಚಿವ ಶರಣಬಸಪ್ಪ ದರ್ಶನಾಪುರ ತಿಳಿಸಿದರು.

*******

ಪರಿಸರ ಸಂರಕ್ಷಣೆ ನಿಟ್ಟಿನಲ್ಲಿ ಸರ್ಕಾರ ಹಲವಾರು ಯೋಜನೆಗಳನ್ನು ಅನು ್ಠಾನಗೊಳಿಸುತ್ತಿದ್ದು, ಈ ಕಾರ್ಯಗಳಲ್ಲಿ ಮಾಧ್ಯಮಗಳ ಸಹಕಾರ ಮತ್ತು ಸಹಭಾಗಿತ್ವ ಅಗತ್ಯ ಎಂದು ಬೀದರ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಹೇಳಿದ್ದಾರೆ. ಬೀದರನ ಗುರುನಾನಕ್ ಇಂಜಿನಿಯರಿಂಗ್ ಕಾಲೇಜು ಸಭಾಂಗಣದಲ್ಲಿ ಆಯೋಜಿಸಿದ್ದ ಮಾಧ್ಯಮ ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದ ಅವರು, ಪರಿಸರ ಜಾಗೃತಿ ಮೂಡಿಸುವಲ್ಲಿ ಮಾಧ್ಯಮಗಳ ಪಾತ್ರ ಮಹತ್ವದ್ದು, ಸಮಾಜದ ಚೇತನ ಶಕ್ತಿಯಾಗಿ ಮಾಧ್ಯಮಗಳು ಕಾರ್ಯನಿರ್ವಹಿಸುತ್ತವೆ. ಪರಿಸರ ನಾಶ, ಹವಾಮಾನ ಬದಲಾವಣೆ, ಜಲಸಂಕ ್ಟ ಮತ್ತು ವನ್ಯಜೀವಿಗಳ ಸಂರಕ್ಷಣೆಯಂತಹ ವಿ ’ಯಗಳಲ್ಲಿ ಜಾಗೃತಿ ಮೂಡಿಸಲು ಮಾಧ್ಯಮಗಳ ಪಾತ್ರ ಅತ್ಯಂತ ಅಗತ್ಯವಾಗಿದೆ ಎಂದರು.

*******

ಈಗ ಪ್ರಕಟಣೆ.. ನಂತರ ಪ್ರದೇಶ ಸಮಾಚಾರ ಮುಂದುವರಿಯುವುದು..

ಪ್ರಕಟಣೆ

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..

*******

ಕೇಂದ್ರ ಪುರಸ್ಕೃತ ಆರ್ಥಿಕ ಹಾಗೂ ಸಾಮಾಜಿಕ ಭದ್ರತಾಯೋಜನೆಗಳ ಕುರಿತು, ಜನಸಾಮಾನ್ಯರಿಗೆ ತಿಳಿವಳಿಕೆ ಮೂಡಿಸುವ, ಜನಜಾಗೃತಿ ಕಾರ್ಯಕ್ರಮ, ರಾಜ್ಯದ 31 ಜಿಲ್ಲೆಗಳಲ್ಲಿ, ಸೆಪ್ಟೆಂಬರ್ 30ರ ವರೆಗೆ ಮುಂದುವರಿಯಲಿದೆ. ಹಾವೇರಿ ತಾಲೂಕು, ಕಬ್ಬೂರು ಗ್ರಾಮ ಪಂಚಾಯ್ತಿ ವ್ಯಾಪ್ತಿಯಲ್ಲಿ ಜರುಗಿದ, ಜನ ಜಾಗೃತಿ ಕಾರ್ಯಕ್ರಮದಲ್ಲಿ, ಅಗ್ರಣಿ ಬ್ಯಾಂಕ್ ಪ್ರಬಂಧಕರು, ಪ್ರಧಾನಮಂತ್ರಿ ಸುರಕ್ಷಾ ವಿಮೆ, ಪ್ರಧಾನಮಂತ್ರಿ ಜೀವನಜ್ಯೋತಿ ವಿಮೆ ಹಾಗೂ ಅಟಲ್ ಪಿಂಚಣಿ ಯೋಜನೆಯಡಿ, ರೈತರು ಹೆಸರು ನೋಂದಾಯಿಸುವಂತೆ ಕೋರಿದರು.

ಪ್ರಬಂಧಕರ ಧ್ವನಿ 39 ಸೆಕೆಂದುಗಳು

*******

ಕಳೆದ 40 ವರ್ಷಗಳಿಂದ ಕೈಮಗ್ಗ ನೇಕಾರಿಕೆ ವೃತ್ತಿಯಲ್ಲಿ ತೊಡಗಿರುವ ಗದಗ ಜಿಲ್ಲೆ ಗಜೇಂದ್ರಗಡದ ತೇಜಪ್ಪ ಚಿನ್ನೂರ, 2025–26ನೇ ಸಾಲಿನ ಹತ್ತಿ ವಿಭಾಗದಲ್ಲಿ ರಾಜ್ಯ ಮಟ್ಟದ ಕೈಮಗ್ಗ ನೇಕಾರರ ಪ್ರಶಸ್ತಿಗೆ ಭಾಜನರಾಗಿದ್ದಾರೆ. ಪರಿಶುದ್ಧ ಹತ್ತಿ ನೂಲಿನಿಂದ ತಯಾರಿಸಿದ ‘ಪಟ್ಟೇದ ಅಂಚು ಸೀರೆ’ ಗಳ ಉತ್ಪಾದನೆಗೆ ಪ್ರಸಿದ್ಧಿ ಪಡೆದಿರುವ ಗಜೇಂದ್ರಗಡದಲ್ಲಿ ಕಾರ್ಯ ನಿರ್ವಹಿಸುತ್ತಿರುವ ತೇಜಪ್ಪ ಅವರು ತಯಾರಿಸುವ ಸಿಂಧೂರ ಚೆಕ್ಸ ಸೀರೆಗೆ ಪ್ರಶಸ್ತಿ ದೊರೆತಿದೆ. ಈಗಾಗಲೇ ಗಜೇಂದ್ರಗಡದ

ಪಟ್ಟೇದ ಅಂಚು ಸೀರೆಗೆ, ಭಾರತ ಸರ್ಕಾರದಿಂದ ಭೌಗೋಳಿಕ ಹಕ್ಕು ಸ್ವಾಮ್ಯ ಮಾನ್ಯತೆ ದೊರಕಿದ್ದು, ಇಲ್ಲಿನ ಸುಮಾರು 400 ಕೈಮಗ್ಗಗಳ ಪೈಕಿ 200 ಕೈಮಗ್ಗಗಳು "ಪಟ್ಟೆದ ಅಂಚು ಸೀರೆ" ಗಳ ಉತ್ಪಾದನೆ ಮಾಡುತ್ತಿವೆ.

*******

ಕೋಲಾರ ಜಿಲ್ಲೆಯ ಬಂಗಾರಪೇಟೆ ತಾಲೂಕಿನ ಹುಲಿಬೆಲೆ ಗ್ರಾಮಪಂಚಾಯಿತಿಯಲ್ಲಿ ಕೇಂದ್ರ ಸರ್ಕಾರದ ಭದ್ರತಾ ಯೋಜನೆಗಳ ಜನಸುರಕ್ಷಾ ಅಭಿಯಾನ ಜರುಗಿತು. ಪ್ರಧಾನಮಂತ್ರಿ ಸುರಕ್ಷಾ ಬಿಮಾ ಯೋಜನೆಯಡಿ 65, ಪ್ರಧಾನಮಂತ್ರಿ ಜೀವನ್ ಜ್ಯೋತಿ ಬಿಮಾ ಯೋಜನೆಯಡಿ 45 ಹಾಗೂ ಅಟಲ್ ಪೆನ್ಷನ್ ಯೋಜನೆಯಡಿ 12 ಜನರ ನೋಂದಣಿ, ಬ್ಯಾಂಕ್‌ನಲ್ಲಿ ಖಾತೆ ಹೊಂದಿಲ್ಲದ ಗ್ರಾಹಕರಿಗೆ ಜನ್ ಧನ್ ಯೋಜನೆಯಡಿ ಖಾತೆಗಳನ್ನು ತೆರೆಯಲಾಯಿತು. ಸ್ಥಗಿತಗೊಂಡಿರುವ ಬ್ಯಾಂಕ್ ಖಾತೆಗಳನ್ನು ಕೆವೈಸಿ ನವೀಕರಿಸಿ ಮರುಚಾಲನೆಗೊಳಿಸಲಾಯಿತು. ಪ್ರಧಾನಮಂತ್ರಿ ಜೀವನ್ ಜ್ಯೋತಿ ಬಿಮಾ ಯೋಜನೆ ಕುರಿತಂತೆ ಜಿಲ್ಲಾ ಮಾರ್ಗದರ್ಶಿ ಬ್ಯಾಂಕ್‌ನ ಆರ್ಥಿಕ ಸಾಕ್ಷರತಾ ಸಲಹೆಗಾರ ನಾಗೇಂದ್ರಕುಮಾರ್ ಮಾಹಿತಿ ನೀಡಿದರು.

*******

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

ಕರ್ನಾಟಕದಲ್ಲಿ ರೈಲ್ವೆ ಸಂಪರ್ಕ ಹೆಚ್ಚಿಸಲು ಭಾರತೀಯ ರೈಲ್ವೆಯಿಂದ ಹಲವು ಯೋಜನೆಗಳು.

ಇದೇ 10 ರಂದು, ಬೆಳಗಾವಿ–ಬೆಂಗಳೂರು ವಂದೇ ಭಾರತ್ ರೈಲು ಸಂಚಾರಕ್ಕೆ ಪ್ರಧಾನ ಮಂತ್ರಿ ಚಾಲನೆ.

ಸಾಮಾಜಿಕ ಹಾಗೂ ಆರ್ಥಿಕ ಭದ್ರತಾ ಯೋಜನೆಗಳ ಕುರಿತು, ಜನಸುರಕ್ಷಾ ಅಭಿಯಾನ ಮುಂದುವರಿಕೆ.

ಗದಗ ಜಿಲ್ಲೆ ಗಜೇಂದ್ರಗಡದ ಪಟ್ಟೇದ ಅಂಚು ಸೀರೆಗೆ, ಹತ್ತಿ ವಿಭಾಗದಲ್ಲಿ ರಾಜ್ಯ ಮಟ್ಟದ ಕೈಮಗ್ಗ ನೇಕಾರರ ಪ್ರಶಸ್ತಿ.

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಿಗ್ಗೆ 7 ಗಂಟೆ 35 ನಿಮಿಷಕ್ಕೆ

*******